**ಸಾಕ್ಷಿಯನ್ನು ದಿಃ 12.09.2025 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದಃ**

ಈ ದಿನ ನಾನು ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ನಮೂದಿಸಿರುವ ಎಲ್ಲಾ ವಿಷಯಗಳು ಸರಿಯಾಗಿ ಮತ್ತು ಸತ್ಯವಾಗಿರುತ್ತವೆ. ಅದಕ್ಕೆ ನನ್ನ ಸಹಿ ಇರುತ್ತದೆ.

ಪ್ರಥಮ ವರ್ತಮಾನ ವರದಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 1 ಎಂದು,

ದೂರಿನ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 2 ಎಂದು,

ಸ್ಥಳ ಪಂಚನಾಮೆ ಮತ್ತು ಲಗತ್ತಾದ ಕಚ್ಚಾ ನಕ್ಷೆಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 3 ಎಂದು,

ಐಎಂವಿ ವರದಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 4 ಎಂದು,

ಎಂ.ಎಲ್.ಸಿ. ರಿಜಿಸ್ಟರ್ ಅನ್ನು ಹಾಜರು ಪಡಿಸಿದ್ದು ಅದನ್ನು ಒಟ್ಟಾಗಿ ನಿಪಿ. 5 ಎಂದು,

ಎರಡು ಗಾಯದ ಪ್ರಮಾಣ ಪತ್ರದ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 6 ಮತ್ತು ನಿಪಿ. 7 ಎಂದು,

ಶವ ತನಿಖಾ ವರದಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 8 ಎಂದು,

ಪಿ.ಎಂ. ವರದಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 9 ಎಂದು,

ಅಂತಿಮ ದೋಷಾರೋಪಣಾ ಪಟ್ಟಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 10 ಎಂದು,

1 ಮತ್ತು 2 ನೇ ಅರ್ಜಿದಾರರ ಆಧಾರ್ ಕಾರ್ಡ್ ನ ನೋಟರಿಕೃತ ದಾಖಲೆ ಹಾಜರುಪಡಿಸಿದ್ದು, ಅದನ್ನು ನಿಪಿ. 11 ಮತ್ತು ನಿಪಿ. 12 ಎಂದು,

ಮೃತರ ಆಧಾರ್ ಕಾರ್ಡ್ ನ ನೋಟರಿಕೃತ ದಾಖಲೆ ಹಾಜರುಪಡಿಸಿದ್ದು, ಅದನ್ನು ನಿಪಿ. 13 ಎಂದು,

1 ಮತ್ತು 2 ನೇ ಅರ್ಜಿದಾರರ ಪಾನ್ ಕಾರ್ಡ್ ನ ನೋಟರಿಕೃತ ದಾಖಲೆ ಹಾಜರುಪಡಿಸಿದ್ದು, ಅದನ್ನು ನಿಪಿ. 14 ಮತ್ತು ನಿಪಿ. 15 ಎಂದು,

ಒಂದು ಆರ್.ಟಿ.ಸಿ ಹಾಜರು ಪಡಿಸಿದ್ದು ಅದನ್ನು ನಿಪಿ. 16 ಎಂದು ಗುರುತಿಸಲಾಯಿತು. ಆದುದರಿಂದ ನಾನು ಕೋರಿರುವಂತೆ ಅರ್ಜಿಯನ್ನು ಪುರಸ್ಕರಿಸಬೇಕಾಗಿ ಪ್ರಾರ್ಥಿಸುತ್ತೇನೆ.

(ನಿಪಿ. 11 ರಿಂದ 15 ರ ಮೂಲ ದಾಖಲೆಗಳನ್ನು ಪರಿಶೀಲಿಸಿ ಸಾಕ್ಷಿಗೆ ಹಿಂದಿರುಗಿಸಲಾಯಿತು)

**ಪಾಟೀ ಸವಾಲುಃ ಎದುರುದಾರರ ಪರ ವಕೀಲರಿಂದಃ**

ಸಮಯಾವಕಾಶವನ್ನು ಕೋರಿದ್ದು ನೀಡಲಾಯಿತು.

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-

ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು

ಮತ್ತು ಎಂ.ಎ.ಸಿ.ಟಿ., ಮೈಸೂರು.